ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 04-05-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಜಲಸಂಪನ್ಮೂಲ ಇಲಾಖೆಯಿಂದ ಹೆಸರಾಂತ ನೀರಾವರಿ ತಂತ್ರಜ್ಞ ದಿವಂಗತ ಎಸ್.ಜಿ. ಬಾಳೇಕುಂದ್ರಿ ಅವರ ಜನ್ಮ ದಿನಾಚರಣೆ | 5-5-2016 ಗುರುವಾರ ಬೆಳಿಗ್ಗೆ 9-30 ಗಂಟೆಗೆ | ಎಸ್.ಜಿ. ಬಾಳೇಕುಂದ್ರಿ ವೃತ್ತ, ಇಂಡಿಯನ್ ಎಕ್ಸ್‌ಪ್ರೆಸ್ ಕಛೇರಿ ಬಳಿ ಕ್ವೀನ್ಸ್ ರಸ್ತೆ, ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಹಿರಿಯ ಪತ್ರಕರ್ತ ಜಯಶೀಲರಾವ್ ನಿಧನಕ್ಕೆ ಶ್ರದ್ಧಾಂಜಲಿ ಸಭೆ

ಬೆಂಗಳೂರು, ಮೇ 4 (ಕರ್ನಾಟಕ ವಾರ್ತೆ)

ಹಿರಿಯ ಪತ್ರಕರ್ತ ಎಸ್. ವಿ. ಜಯಶೀಲರಾವ್ ಅವರ ನಿಧನಕ್ಕೆ ಮೇ 6 ರಂದು ಬೆಳಿಗ್ಗೆ 10-30 ಗಂಟೆಗೆ ಬೆಂಗಳೂರಿನ ಕುಮಾರಕೃಪ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಅವರ ಅಭಿಮಾನಿ ಬಳಗದಿಂದ ಶ್ರದ್ಧಾಂಜಲಿ ಸಭೆ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಎಲ್ಲ ಮಾಧ್ಯಮ ಮಿತ್ರರು, ಜಯಶೀಲರಾವ್ ಅವರ ಅಭಿಮಾನಿಗಳು ಹಾಗೂ ಸಾರ್ವಜನಿಕರು ಈ ಶ್ರದ್ಧಾಂಜಲಿ ಸಭೆಗೆ ಆಗಮಿಸುವಂತೆ ಅವರ ಆಪ್ತ ಬಳಗ ಕೋರಿದೆ.

ಹೆಚ್‌ಬಿಡಿ/ಬಾಬು/ಕೆಎಂ

# ಸೋಲಾರ್ ಅಳವಡಿಕೆಗೆ ದರ ಪರಿಷ್ಕರಣೆ

**– ಡಿ.ಕೆ. ಶಿವಕುಮಾರ್**

**ಬೆಂಗಳೂರು, ಮೇ 4 (ಕರ್ನಾಟಕ ವಾರ್ತೆ)**

**ಆಸ್ಪತ್ರೆಗಳು, ವಸತಿಗೃಹ ಹಾಗೂ ಶಿಕ್ಷಣ ಸಂಸ್ಥೆಗಳ ಮೇಲ್ಛಾವಣಿಗಳ ಮೇಲೆ ಅಳವಡಿಸುವ ಸೋಲಾರ್‌ಗೆ ಕರ್ನಾಟಕ ವಿದ್ಯುತ್‌ಚ್ಛಕ್ತಿ ನಿಯಂತ್ರಣ ಮಂಡಳಿ ದರ ಪರಿಷ್ಕರಣೆ ಮಾಡಿ ಆದೇಶ ಹೊರಡಿಸಿದೆ ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.**

**ವಿಧಾನಸೌಧದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಮೇಲ್ಛಾವಣಿ ಮೇಲೆ ಸೋಲಾರ್ ಅಳವಡಿಸುವವರಿಗೆ ಈ ಹಿಂದೆ ನೆಟ್ ಮೀಟರಿಂಗ್ ವ್ಯವಸ್ಥೆ ಇತ್ತು. ಇನ್ನು ಮುಂದೆ ಗ್ರಾಸ್ ಮೀಟರಿಂಗ್ ಜಾರಿಗೆ ಬರಲಿದೆ ಎಂದ ಸಚಿವರು ಈ ಹಿಂದೆ ಪ್ರತಿ ಯೂನಿಟ್‌ಗೆ 9.56 ರೂ. ನೀಡಿ ಖರೀದಿಸಲಾಗುತ್ತಿತ್ತು. ಈಗ 7.8 ರೂ ಗೆ ಖರೀದಿ ಮಾಡಲು ನಿರ್ಧರಿಸಲಾಗಿದೆ ಎಂದರು.**

**ರಾಜ್ಯದಲ್ಲಿ ಅವೈಜ್ಞಾನಿಕ ವಿದ್ಯುತ್ ಲೋಡ್ ಶೆಡ್ಡಿಂಗ್ ಇಲ್ಲ ಎಂದ ಇಂಧನ ಸಚಿವರು ರಾಮನಗರ ಜಿಲ್ಲೆಯ ಬಿಡದಿ ಹತ್ತಿರ 400 ಕೆ.ವಿ. ವಿದ್ಯುತ್ ಟವರ್ ಸ್ಥಾಪನೆಗೆ ಸಂಬಂಧಿಸಿದಂತೆ ಸಮಸ್ಯೆ ಇತ್ತು. ಇಂದು ಆ ಭಾಗದ ರೈತರು, ಎಲ್ ಅಂಡ್ ಟಿ ಅಧಿಕಾರಿಗಳು ಹಾಗೂ ಇಂಧನ ಇಲಾಖೆಯ ಅಧಿಕಾರಿಗಳ ಜೊತೆ ಚರ್ಚಿಸಲಾಗಿದ್ದು ಸಮಸ್ಯೆ ಬಗೆಹರಿಸಲಾಗಿದೆ ಎಂದು ಇದೇ ಸಂದರ್ಭದಲ್ಲಿ ಸಚಿವರು ಸುದ್ದಿಗಾರರೊಂದಿಗೆ ಮಾತನಾಡಿದರು.**

**ಬಾಬು/ಕೆಪಿಪಿ/ಜಿಪಿಆರ್.**

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಮೇ 4 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಭೌತಶಾಸ್ತ್ರ, ಜೀವಶಾಸ್ತ್ರ, ಗಣಿತ ಶಾಸ್ತ್ರ ಹಾಗೂ ಕಂಪ್ಯೂಟರ್ ಸೈನ್ಸ್ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿನಾಂಕ: 02-05-2016 ರಂದು ಆಯೋಗದ ಅಂತರ್ಜಾಲ**

**http://kpsc.kar.ni.cin/Selection List/Provisional Selection List** ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಬಾಬು/ಜಿಪಿಆರ್.